AUGUST, 06 2025

**AKASHAVANI - DHARWAD**

**PRADESH SAMACHARA (KANNADA) 12 P.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ರಾಜ್ಯ ಸರ್ಕಾರ, ರಾಯಚೂರು ಜಿಲ್ಲೆಯಲ್ಲಿ** ಏಮ್ಸ್ ಸ್ಥಾಪನೆ ನಿರ್ಧಾರಕ್ಕೆ ಬದ್ಧವಾಗಿದ್ದು, ಈಗಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಎರಡು ಬಾರಿ, ಪ್ರಧಾನಮಂತ್ರಿ ನರೇಂದ್ರ ಮೋದಿ, ಕೇಂದ್ರ ಹಣಕಾಸು ಹಾಗೂ ಆರೋಗ್ಯ ಸಚಿವರಿಗೆ ಪತ್ರ ಬರೆದು ಅನುಮತಿಗಾಗಿ ವಿನಂತಿಸಿದ್ದಾರೆ ಎಂದು ಸಣ್ಣ ನೀರಾವರಿ ಖಾತೆ ಸಚಿವ ಎನ್.ಎಸ್ ಬೋಸರಾಜು ಹೇಳಿದರು.  ನಗರದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ರಾಜ್ಯದ ಎಲ್ಲ ಸಂಸದರು, ರಾಯಚೂರು ಏಮ್ಸ್ ಸ್ಥಾಪನೆಗೆ ಬೆಂಬಲ ನೀಡಬೇಕು ಎಂದರು. ರಸಗೊಬ್ಬರ ಲಭ್ಯತೆ ಬಗ್ಗೆ ಉಲ್ಲೇಖಿಸಿದ ಅವರು, ಇಂದು ಜಿಲ್ಲೆಗೆ ಸಾವಿರದ 500 ಟನ್ ಯೂರಿಯಾ ರಸಗೊಬ್ಬರ ತಲುಪಲಿದೆ, ಬೇಡಿಕೆ ಅನುಸಾರ ಗೊಬ್ಬರ ವಿತರಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

<><><>

**ಆತ್ಮನಿರ್ಭರ ಭಾರತ– ಪ್ರಧಾನಮಂತ್ರಿ ಕಿರು ಆಹಾರ ಸಂಸ್ಕರಣಾ** ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ–ಪಿ.ಎಂ.ಎಫ್.ಎಂ.ಇ ಅಡಿ, ಆರ್ಥಿಕ ಧನ ಸಹಾಯ ಪಡೆದು, ಬೇಕರಿ ಉತ್ಪನ್ನ ತಯಾರಿ ಕೇಂದ್ರ ಆರಂಭಿಸಿ ಯಶಸ್ವಿಯಾಗಿದ್ದಾರೆ, ಧಾರವಾಡದ ವಿಜಯ ಮಹಾಂತೇಶ, ಪ್ರದೇಶ ಸಮಾಚಾರಕ್ಕಾಗಿ ಅವರು ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

<><><>

**ಧ್ವನಿ: ವಿಜಯ ಮಹಾಂತೇಶ 27 ಸೆಕೆಂದುಗಳು**

<><><>

**ಮಂಡ್ಯ ಜಿಲ್ಲೆಯಲ್ಲಿ, ಶಿಶು ಮರಣ ಸಂಭವಿಸದಂತೆ** ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಕೊಳ್ಳಬೇಕು ಎಂದು ಆರೋಗ್ಯ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ  ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ನಂದಿನಿ ಕೆ.ಆರ್. ಹೇಳಿದ್ದಾರೆ. ನಗರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಆವರಣದ, ಡಾಕ್ಟರ್ ಜೆ.ಎಲ್.ಜವರೇಗೌಡ ಸಭಾಂಗಣದಲ್ಲಿ ಜರುಗಿದ, ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮದ, ಪ್ರಗತಿ ಪರಿಶೀಲನಾ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಗರ್ಭಾವಸ್ಥೆಯಿಂದಲೇ ಗುಣಮಟ್ಟದ ಆರೋಗ್ಯ ಸೇವೆ, ಸುರಕ್ಷಿತ ಹೆರಿಗೆ, ಶಿಶು ಆರೈಕೆ ಮತ್ತು ತುರ್ತು ಚಿಕಿತ್ಸೆಯ ಲಭ್ಯತೆಯನ್ನು ಖಾತ್ರಿಪಡಿಸಿಕೊಳ್ಳಬೇಕು. ಪೋ  ‘ಕಾಂಶಯುಕ್ತ ಆಹಾರ ಸೇವನೆ, ಲಸಿಕಾಕರಣ ಸೇರಿದಂತೆ, ಪೋ  ‘ಕರಿಗೆ ಶಿಶು ಆರೋಗ್ಯದ ಕುರಿತು ಜಾಗೃತಿ ಮೂಡಿಸಬೇಕು ಎಂದರು.

<><><>

**ರಾಜ್ಯ ಸರ್ಕಾರವು, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ** ಉದ್ಯೋಗ ಖಾತರಿ ಯೋಜನೆ –ನರೇಗಾ ಸೇರಿದಂತೆ ಇತರೆ ಗ್ರಾಮೀಣ ಉದ್ಯೋಗಗಳಲ್ಲಿ ದುಡಿಯುವ ಮಹಿಳೆಯರ ನೆರವಿಗೆ, ‘ ಕೂಸಿನ ಮನೆ’ ತೆರೆಯುವ ಮೂಲಕ,  ಅವರ ಸ್ವಾವಲಂಬಿ ಬದುಕಿಗೆ ಅನುಕೂಲವಾಗಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯಿತಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾಕ್ಟರ್ ಕೆ.ಎನ್.ಅನುರಾಧ ತಿಳಿಸಿದ್ದಾರೆ. ದೊಡ್ಡಬಳ್ಳಾಪುರದಲ್ಲಿ ಕೂಸಿನ ಮನೆಗೆ ಭೇಟಿ ನೀಡಿ ಪರಿಶೀಲಿಸಿ, ಮಾತನಾಡಿದ ಅವರು, ಜಿಲ್ಲೆಯ ದೇವನಹಳ್ಳಿ ತಾಲೂಕಿನಲ್ಲಿ 18, ದೊಡ್ಡ ಬಳ್ಳಾಪುರ ಹಾಗೂ ಹೊಸಕೋಟೆಯಲ್ಲಿ ತಲಾ 22 ಮತ್ತು ನೆಲಮಂಗಲದಲ್ಲಿ 17 ಕೂಸಿನ ಮನೆಗಳು ಕಾರ್ಯನಿರ್ವಹಿಸುತ್ತಿವೆ. ಮಕ್ಕಳಿಗೆ ಕಾಲ, ಕಾಲಕ್ಕೆ ಲಸಿಕೆ ಹಾಗೂ ಆರೋಗ್ಯ ತಪಾಸಣೆ ಮಾಡಲಾಗುತ್ತಿದೆ ಎಂದರು.

<><><>

**ರಾಯಚೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್**, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ತಾಲೂಕು ಆರೋಗ್ಯ ಅಧಿಕಾರಿಗಳ ಸಂಯುಕ್ತಾಶ್ರಯದಲ್ಲಿ, ನಗರದ ಅಮರ ಖೇಡ್ ಆಸ್ಪತ್ರೆಯಲ್ಲಿ ಆರೋಗ್ಯ ತಪಾಸಣೆ ಶಿಬಿರ ಹಾಗೂ ವಿಶ್ವ ಸ್ತನ್ಯಪಾನ ಸಪ್ತಾಹ ಆಚರಿಸಲಾಯಿತು. ಈ ಸಂದರ್ಭ ಮಾತನಾಡಿದ ವೈದ್ಯಾಧಿಕಾರಿ ಡಾಕ್ಟರ್ ಶ್ವೇತಾಂಬರಿ ಅವರು, ಪ್ರಸವದ ಅರ್ಧ ಗಂಟೆಯೊಳಗೆ ಶಿಶುವಿಗೆ ಎದೆ ಹಾಲು ಕುಡಿಸಬೇಕು. ಶಿಶುಗಳಲ್ಲಿ ರೋಗನಿರೋಧಕ ಶಕ್ತಿ ವರ್ಧನೆಗೆ, ಆರು ತಿಂಗಳವರೆಗೆ ಎದೆಹಾಲು ಮಾತ್ರ ನೀಡಬೇಕು ಎಂದರು.

<><><>

**ಧಾರವಾಡ ಕೃಷಿ ವಿಶ್ವವಿದ್ಯಾಲಯದ** ನೇತೃತ್ವದಲ್ಲಿ, ವಿಜ್ಞಾನಿಗಳ ತಂಡವು, ಗರಗ ಹಾಗೂ ಅಮ್ಮಿನಭಾವಿ ಹೋಬಳಿಯ, ವಿವಿಧ ಗ್ರಾಮಗಳ ರೈತರ ಹೊಲಗಳಿಗೆ ತೆರಳಿ, ಬೆಳೆಗಳಿಗೆ ತಗುಲಿದ ರೋಗವನ್ನು ಪರಿಶೀಲಿಸಿತು. ಮೋಡಕವಿದ ವಾತಾವರಣದ ಹಿನ್ನೆಲೆ, ಹೆಸರು, ಉದ್ದು, ಸೋಯಾ ಅವರೆ ಬೆಳೆಗಳಿಗೆ ಕೀಟ ಬಾಧೆ ಹೆಚ್ಚಿದ್ದು, ರೋಗ ನಿಯಂತ್ರಣದ ಬಗ್ಗೆ ವಿಜ್ಞಾನಿಗಳು ಹಾಗೂ ತಜ್ಞರು ರೈತರಿಗೆ ಬೆಳೆ ನಿರ್ವಹಣೆ ಮಾಹಿತಿ ನೀಡಿದರು.

<><><>

**ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ, ಹೊಸನಗರ** ಹಾಗೂ ಸಾಗರ ತಾಲೂಕುಗಳಲ್ಲಿ ಧಾರಾಕಾರ ಮಳೆಯಾಗುತ್ತಿದೆ. ಮಲೆನಾಡು ಪ್ರದೇಶದಲ್ಲಿ ಹೆಚ್ಚಿನ ಮಳೆಯಾಗುತ್ತಿರುವ ಹಿನ್ನೆಲೆ ಜನ ಜೀವನ ಅಸ್ತವ್ಯಸ್ತಗೊಂಡಿದೆ. ಹಳ್ಳ, ಕೊಳ್ಳಗಳು ಉಕ್ಕಿ ಹರಿಯುತ್ತಿದ್ದು, ಬೆಳ್ಳೂರು ಗ್ರಾಮದ ಭತ್ತದ ಗದ್ದೆಗಳು ಜಲಾವೃತಗೊಂಡಿವೆ.

<><><>

**ಹಂಪಿ ಕನ್ನಡ ವಿಶ್ವವಿದ್ಯಾಲಯದ,** ಪ್ರಸರಾಂಗದಿಂದ, ಸಾವಿರದ 600 ಪುಸ್ತಕಗಳನ್ನು ಬಿಡುಗಡೆಗೊಳಿಸಿ, ಕನ್ನಡ ಸಾರಸ್ವತ ಲೋಕಕ್ಕೆ ಸಮರ್ಪಿಸಿರುವುದು ಹೆಮ್ಮೆಯ ವಿಷಯವಾಗಿದೆ ಎಂದು ವಿಶ್ವವಿದ್ಯಾಲಯದ ಉಪ ಕುಲಪತಿ ಡಾಕ್ಟರ ಬಿ.ವಿ ಪರಮ ಶಿವಮೂರ್ತಿ ಹೇಳಿದರು. ಕೇಂದ್ರ ಸಂಸ್ಕೃತಿ ಸಚಿವಾಲಯ, ಕೇಂದ್ರ ಸಾಹಿತ್ಯ ಅಕಾದೆಮಿ ಹಾಗೂ ಕನ್ನಡ ವಿಭಾಗದ ಸಹಯೋಗದಲ್ಲಿ, ವಿಶ್ವ ವಿದ್ಯಾಲಯದ ಭುವನ ವಿಜಯ ಸಭಾಂಗಣದಲ್ಲಿ ಆಯೋಜಿತ, 'ದಕ್ಷಿಣ ಭಾರತೀಯ ಭಾಷೆಗಳಲ್ಲಿ ಸಾಹಿತ್ಯ ವಿಮರ್ಶೆ' ವಿಚಾರಗೋಷ್ಠಿ ಉದ್ಘಾಟಿಸಿ ಅವರು ಮಾತನಾಡಿದರು.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>